<u>ಅಸಲು ದಾವಾ ಸಂಖ್ಯೆ: **47/2022**</u> ಡಿ.ಡಬ್ಲ್ಯೂ.:- **1**

ದಿನಾಂಕಃ **13-03-2026** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು:- ವಾದಿ ಪರ ವಕೀಲರಿಂದ:-</u>

1 ನೇ ಪ್ರತಿವಾದಿ ನನ್ನ ತಂದೆ. ನಮ್ಮ ತಂದೆಗೆ ನಾವು 4 ಜನ ಮಕ್ಕಳು ಅಂದರೆ 2 ರಿಂದ 5 ನೇ ಪ್ರತಿವಾದಿಗಳು. ಕಾಮವ್ವ ಗೊತ್ತು. ಕಾಮವ್ವನ ಜೀವಂತ ಕಾಲದಲ್ಲಿ ಬಸಪ್ಪ ಬಿನ್ ರಂಗಪ್ಪ ಮತ್ತು ಕಾಮವ್ವನ ನಡುವೆ ಕರಾರು ಪತ್ರ ಆಗಿತ್ತು ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಸರ್ವೇ ನಂ.55/9 ರಲ್ಲಿ 6 ಎಕರೆ 23 ಗುಂಟೆ ಜಮೀನು ಇರುತ್ತದೆ. ದಾವಾ ಆಸ್ತಿಯಲ್ಲಿ ಕೇವಲ 27 ಗುಂಟೆ ಜಮೀನು ಇದೆ ಎಂದರೆ ಸರಿಯಲ್ಲ. 27 ಗುಂಟೆ ಜಮೀನಿನಲ್ಲಿ ವಾದಿಯು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ಮೇಲ್ಕಂಡ ವಿಚಾರ ನನಗೆ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಸೊರಟೂರು ಗ್ರಾಮದಲ್ಲಿರುತ್ತದೆ. ವಾದಿಯು ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ. 1 ಮತ್ತು 3 ನೇ ಪ್ರತಿವಾದಿಗಳು ಹಣಕಾಸಿನ ತೊಂದರೆಯಿಂದಾಗಿ ದಾವಾ ಆಸ್ತಿಯನ್ನು ಕಾಮವ್ವನಿಗೆ ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. 1 ಮತ್ತು 3 ನೇ ಪ್ರತಿವಾದಿಗಳು ಕಾಮವ್ವನ ಹೆಸರಿಗೆ ಕ್ರಯದ ಕರಾರು ಪತ್ರವನ್ನು ಬರೆದುಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಕ್ರಯ ಪತ್ರವನ್ನು ಬರೆದುಕೊಟ್ಟು ಅದೇ ದಿನ ಸ್ವಾಧೀನವನ್ನು ಸಹ ಬಿಟ್ಟುಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಕ್ರಯದ ಕರಾರು ಪತ್ರವನ್ನು ಬರೆದುಕೊಡುವ ಸಮಯದಲ್ಲಿ ಮುಂಗಡವಾಗಿ ರೂ.815/- ಹಣವನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ಕ್ರಯದ ಕರಾರು ಪತ್ರದ ಬಗ್ಗೆ ನನಗೆ ನೋಟೀಸು ಬಂದ ನಂತರ ತಿಳಿದಿರುತ್ತದೆ. ನಿಪಿ-1 ರಲ್ಲಿ ಕ್ರಯ ಪತ್ರವನ್ನು ನೋಂದಣಿ ಮಾಡಿಸುವ ಸಮಯದಲ್ಲಿ ಬಾಕಿ ಮೊತ್ತ ರೂ.400/- ಹಣವನ್ನು ಪಡೆದುಕೊಂಡು ಮಾಡಿಸಿಕೊಡುತ್ತೇವೆ ಎಂದು ನಮೂದಾಗಿದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಿಪಿ-1 ರ ಕ್ರಯದ ಕರಾರು ಪತ್ರದ ಬಗ್ಗೆ ನಮಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ನಿಪಿ-1 ಕ್ರಯದ ಕರಾರು ಪತ್ರದ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮಂಜುಳರವರು 1 ಮತ್ತು 3 ನೇ ಪ್ರತಿವಾದಿಯವರನ್ನು ಸಾಕಷ್ಟು ಬಾರಿ

ಕ್ರಯ ಪತ್ರವನ್ನು ಬರೆದುಕೊಡುವಂತೆ ಕೇಳಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿ 1 ಮತ್ತು 3 ರವರು ಕ್ರಯ ಪತ್ರವನ್ನು ಬರೆದುಕೊಡದೇ ಇದ್ದ ಕಾರಣ ವಕೀಲರ ಮೂಲಕ ನೋಟೀಸನ್ನು ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ನಮಗೆ ನೋಟೀಸು ಬಂದ ನಂತರ ತಿಳಿದಿರುತ್ತದೆ ಅದಕ್ಕೂ ಪೂರ್ವದಲ್ಲಿ ಏನು ಆಗಿದೆ ಎಂಬ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನೋಟೀಸನ್ನು ಪಡೆದುಕೊಂಡ ನಂತರ ವಾದಿಯನ್ನು ಭೇಟಿ ಮಾಡಿದ್ದೀರಿ ಎಂದರೆ ಸಾಕ್ಷಿಯು ನನಗೂ ಮತ್ತು ನಿಪಿ-1 ಕ್ರಯದ ಕರಾರು ಪತ್ರಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಆದ ಕಾರಣ ಭೇಟಿ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ವಾದಿಯು ನೀಡಿದ ಕಾನೂನು ತಿಳುವಳಿಕೆ ಪತ್ರಕ್ಕೆ ಪ್ರತ್ಯುತ್ತರ ನೀಡಿರುವ ಬಗ್ಗೆ ನನಗೆ ನೆನಪಿಲ್ಲ. ನಾನು ವಾದಿಗೆ ಯಾವುದೇ ಪ್ರತ್ಯುತ್ತರವನ್ನು ಕೊಟ್ಟಿಲ್ಲ ಎಂದರೆ ಸಾಕ್ಷಿಯು ನನಗೆ ನೆನಪಿಲ್ಲ ಎಂದು ನುಡಿಯುತ್ತಾರೆ. ಗೌ.ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾವಾ ಆಸ್ತಿಯು ವಾದಿಯ ಪರವಾಗಿ ಆದೇಶವಾಗಿದೆ ಎಂದರೆ ನನಗೆ ಗೊತ್ತಿಲ್ಲ. ನೋಟೀಸನ್ನು ಪಡೆದುಕೊಂಡ ನಂತರ ನಾನು ಕ್ರಯ ಪತ್ರವನ್ನು ಬರೆದುಕೊಡದಿದ್ದ ಕಾರಣ ವಾದಿಯು ಈ ದಾವೆಯನ್ನು ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ನಿಪಿ-1 ಕ್ರಯದ ಕರಾರು ಪತ್ರದಲ್ಲಿ ನಮೂದಾಗಿರುವ ಆಸ್ತಿಗೆ ಸಂಬಂಧಿಸಿದಂತೆ ಕ್ರಯ ಪತ್ರವನ್ನು ಬರೆದುಕೊಡಲು ನನಗೆ ಯಾವುದೇ ಹಕ್ಕು ಮತ್ತು ಬಾಧ್ಯತೆ ಇರುವುದಿಲ್ಲ. ವಾದಿಗೆ ದುರುದ್ದೇಶದಿಂದ ಕ್ರಯ ಪತ್ರವನ್ನು ಬರೆದುಕೊಟ್ಟಿಲ್ಲ ಎಂದರೆ ಸರಿಯಲ್ಲ. ವಾದಿಗೆ ಕ್ರಯ ಪತ್ರವನ್ನು ಬರೆದುಕೊಡಲು ನಾನು ಬಾಧ್ಯಸ್ಥನಾಗಿದ್ದರೂ ಸಹ ಸುಳ್ಳು ಪ್ರತಿವಾದ ಪತ್ರವನ್ನು ಮತ್ತು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯು ಉಪನೋಂದಣಿ ಕಚೇರಿಯಲ್ಲಿ ಕ್ರಯದ ಕರಾರು ಪತ್ರವನ್ನು ಬರಯಿಸಿಕೊಳ್ಳಲು ಕಾಯುತ್ತಿದ್ದರೂ ಸಹ ನಾನು ಹೋಗಿ ಬರೆದುಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಮತ್ತು ಉಳಿದ ಪ್ರತಿವಾದಿಗಳು ವಾದಿಗೆ ಕ್ರಯ ಪತ್ರವನ್ನು ಬರೆದುಕೊಡಲು ಬಾಧ್ಯಸ್ಥರಾಗಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕಾಮವ್ವ ವಾದಿಯ ಅಜ್ಜಿ ಎಂದರೆ ಸರಿ. ನಿಪಿ-1 ಕ್ರಯದ ಕರಾರು ಪತ್ರವನ್ನು ಯಾವ ದಿನ ಆಗಿದೆ ಎಂಬ ವಿಚಾರ ನನಗೆ ಗೊತ್ತಿಲ್ಲ. ನನಗೆ ಈಗ 57 ವರ್ಷ ವಯಸ್ಸು. ದಿಃ 25-01-1968 ರಂದು ನಿಮ್ಮ ಜನನವಾಗಿತ್ತು ಎಂದರೆ ಸಾಕ್ಷಿಯು ಜನನವಾಗಿರುವುದಿಲ್ಲ ದಿಃ 20-07-1969 ರಂದು ನಾನು ಜನಿಸಿರುತ್ತೇನೆ ಎಂದು ನುಡಿಯುತ್ತಾರೆ. 1 ನೇ ಪ್ರತಿವಾದಿ ನ್ಯಾಯಾಲಯಕ್ಕೆ ಬಂದರೆ ಸತ್ಯಾಂಶ ಹೊರಬರುತ್ತದೆ ಎಂದು ಅವರನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ಆರೋಗ್ಯವಾಗಿ ಚನ್ನಾಗಿದ್ದಾರೆ ಮತ್ತು ಅವರ ದಿನನಿತ್ಯದ ಕೆಲಸ ಕಾರ್ಯಗಳನ್ನು ಅವರೇ ಮಾಡಿಕೊಳ್ಳುತ್ತಾರೆ

ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನ್ನಿಂದ ಯಾವುದೇ ತಕರಾರು ಇರುವುದಿಲ್ಲ.

ಮರುವಿಚಾರಣೆ ಇಲ್ಲ.

**ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ., ಹೊನ್ನಾಳಿ.**